## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮದ ವ್ಯಾಪ್ತಿಯಲ್ಲಿ 2022-23ನೇ ಸಾಲಿನಲ್ಲಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ಕ್ರಿಯಾ ಯೋಜನೆಗೆ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:-** ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ ನಿಯಮಿತ ಇವರ ಪ್ರಸ್ತಾವನೆ ಸಂಖ್ಯೆ:ಕ.ಮಡಿವಾಳ.ಮಾ.ಅ.ನಿ/ಸಿ.ಆರ್-03/ 2021-22, ದಿನಾಂಕ:16.05.2022.

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮದ ವತಿಯಿಂದ ಅನುಷ್ಠಾನಗೊಳಿಸ ಲಾಗುತ್ತಿರುವ ಕಾರ್ಯಕ್ರಮಗಳಿಗೆ 2022-23ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕಶೀರ್ಷಿಕೆ: 2225-03-001-0-05 (103) ರಡಿಯಲ್ಲಿ ರೂ.600.00 ಲಕ್ಷಗಳ ಅನುದಾನವನ್ನು ಹಂಚಿಕೆ ಮಾಡಲಾಗಿರುತ್ತದೆ. 2021-22ನೇ ಸಾಲಿನಲ್ಲಿ ಖರ್ಚಾಗದೇ ಉಳಿದಿರುವ ರೂ.39.79 ಲಕ್ಷಗಳು ಸೇರಿ ಒಟ್ಟು ರೂ.639.79 ಲಕ್ಷಗಳಿಗೆ 2022-23ನೇ ಸಾಲಿನಲ್ಲಿ ನಿಗಮವು ಕ್ರಿಯಾ ಯೋಜನೆಯನ್ನು ರೂಪಿಸಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಉದ್ದೇಶಿಸಲಾಗಿದ್ದು, ಸದರಿ ವಿಷಯವನ್ನು ದಿನಾಂಕ: 28.04.2022 ರಂದು ಜರುಗಿದ 08ನೇ ನಿರ್ದೇಶಕರ ಮಂಡಳಿ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆಯಲಾಗಿದ್ದು, ಅದರಂತೆ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

(ರೂ. ಲಕ್ಷಗಳಲ್ಲಿ)

| ಕ್ರ. ಸಂ | ಯೋಜನೆ | ಗುರಿ | |
|---|---|---|---|
| | | ಭೌತಿಕ | ಆರ್ಥಿಕ |
| 1 | ಸ್ವಯಂ ಉದ್ಯೋಗ ಸಾಲ ಯೋಜನೆ | 562 | 280.79 |
| 2 | ಅರಿವು ಶೈಕ್ಷಣಿಕ ಸಾಲ ಯೋಜನೆ ನವೀಕರಣ | 29 | 29.00 |
| 3 | ಅರಿವು ಶೈಕ್ಷಣಿಕ ಸಾಲ ಯೋಜನೆ (ಹೊಸತು) | 50 | 25.00 |
| 4 | ಸಾಂಪ್ರದಾಯಿಕ ವೃತ್ತಿದಾರರ ಸಾಲ ಯೋಜನೆ | 500 | 250.00 |
| 5 | ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆ | 250 | 50.00 |
| 6 | ಆಡಳಿತಾತ್ಮಕ ವೆಚ್ಚ | - | 5.00 |
| | ಒಟ್ಟು | 1391 | 639.79 |

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 375 ಬಿಎಂಎಸ್ 2022,**
**ಬೆಂಗಳೂರು, ದಿನಾಂಕ:23-05-2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮವು ಅನುಷ್ಠಾನಗೊಳಿಸಲು ಉದ್ದೇಶಿಸಿರುವ ಈ ಕೆಳಕಂಡ ಕಾರ್ಯಕ್ರಮಗಳನ್ನು 2022-23ನೇ ಸಾಲಿನಲ್ಲಿ ಮುಂದುವರೆಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮತಿ ನೀಡಿ ಆದೇಶಿಸಲಾಗಿದೆ.

....2

23/5/22

| ಕ್ರ.ಸಂ | ಯೋಜನೆ |
|---|---|
| 1 | ಸ್ವಯಂ ಉದ್ಯೋಗ ಸಾಲ ಯೋಜನೆ |
| 2 | ಅರಿವು ಶೈಕ್ಷಣಿಕ ಸಾಲ ಯೋಜನೆ(ನವೀಕರಣ) |
| 3 | ಅರಿವು ಶೈಕ್ಷಣಿಕ ಸಾಲ ಯೋಜನೆ (ಹೊಸತು) |
| 4 | ಸಾಂಪ್ರದಾಯಿಕ ವೃತ್ತಿದಾರರ ಸಾಲ ಯೋಜನೆ |
| 5 | ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆ |

ಷರತ್ತುಗಳು:-

1. ಸಾಂಪ್ರದಾಯಿಕ ವೃತ್ತಿದಾರರ ಸಾಲ ಯೋಜನೆ,ಸ್ವಯಂ ಉದ್ಯೋಗ ಸಾಲ ಯೋಜನೆ,ಅರಿವು ಶೈಕ್ಷಣಿಕ ಸಾಲ ಯೋಜನೆ (ಹೊಸತು),ಅರಿವು ಶೈಕ್ಷಣಿಕ ಸಾಲ ಯೋಜನೆ(ನವೀಕರಣ)ಗಳಿಗೆ ಕರ್ನಾಟಕ ಸರ್ಕಾರದ ಸುವಿಧಾ ಪೋರ್ಟಲ್ ಮುಖಾಂತರ ಆನ್‌ಲೈನ್ ವಿಧಾನದಲ್ಲಿ ಅರ್ಜಿಗಳನ್ನು ಪಡೆಯತಕ್ಕದ್ದು. ಅರ್ಜಿಗಳನ್ನು ಅಹ್ವಾನಿಸಲು ನಿಗಮವು ಅಧಿಸೂಚನೆ ಹೊರಡಿಸಿದ ದಿನಾಂಕದಿಂದ ಕನಿಷ್ಟ 45 ದಿನಗಳ ಕಾಲಾವಕಾಶ ನೀಡುವುದು.
2. ಸ್ವಾತಂತ್ರ್ಯ ಅಮೃತ್ ಮಹೋತ್ಸವದ ಮುನ್ನಡೆ ಯೋಜನೆಯನ್ನು ಕೌಶಲ್ಯ ಕರ್ನಾಟಕ ಪೋರ್ಟಲ್ ಮುಖಾಂತರ ಅನ್‌ಲೈನ್ ವಿಧಾನದಲ್ಲಿ ಅರ್ಜಿಗಳನ್ನು ಯೋಜನೆಗಳ ಮಾರ್ಗಸೂಚಿಗಳ ಪ್ರಕಾರ ಅಹ್ವಾನಿಸಲಾಗುವುದು
3. ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆಯಡಿಯಲ್ಲಿ ಆಯ್ಕೆಯಾಗುವ ಫಲಾನುಭವಿಗಳಿಗೆ ಅವರ ಮೇರಿಟ್ ಅರ್ಹತೆಯಂತೆ automated merit list ಪ್ರಕಾರ ಹಾಗು ಅವರು ಆಯ್ಕೆಯಾಗುವ ಕೋರ್ಸ್ ಫೀ ಪ್ರಕಾರ ಆರ್ಥಿಕ ಮತ್ತು ಭೌತಿಕ ಗುರಿ ನಿಗದಿಯಾಗುತ್ತದೆ. ಆದರೆ ಯಾವುದೇ ಕಾರಣಕ್ಕೂ ನಿಗಮಕ್ಕೆ ಯೋಜನೆಗಾಗಿ ನಿಗದಿಪಡಿಸಿರುವ ಗರಿಷ್ಟ ಮೊತ್ತವನ್ನು ಮೀರಬಾರದು.
4. ಸದರಿ ಯೋಜನೆಗಳನ್ನು ಸೆಕ್ಷನ್ 7 ಆಧಾರ್ ಕಾಯ್ದೆ ಅಡಿಯಲ್ಲಿ ಅಧಿಸೂಚಿಸಲಾಗಿರುವುದರಿಂದ ಕಡ್ಡಾಯವಾಗಿ ಫಲಾನುಭವಿಯ/ಸಂಸ್ಥೆಯ ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಖಾತೆಗೆ ಡಿಬಿಟಿ ಮೂಲಕ ಸವಲತ್ತನ್ನು ಸಂದಾಯವಾಗಬೇಕು.
5. ಸದರಿ ಯೋಜನೆಗಳ ಮಾರ್ಗಸೂಚಿಯಲ್ಲಿ ಸರ್ಕಾರವು ಏನೇ ಬದಲಾವಣೆ ಮಾಡಿದ್ದಲ್ಲಿ ಆ ದಿನದಿಂದಲೇ ಬದಲಾವಣೆ ಆಗುವ ಮಾರ್ಗಸೂಚಿಗಳ ಅನುಸಾರ ಯೋಜನೆಗಳನ್ನು ಅನುಷ್ಠಾನಮಾಡುವುದು.
6. ನಿಗಮದ ಹಂತದಲ್ಲಿ ಯಾವುದೇ ಯೋಜನೆಯನ್ನು ಬದಲಾವಣೆ ಮಾಡಬೇಕಾದಲ್ಲಿ ಸರ್ಕಾರದ ಪೂರ್ವಾನುಮೋದನೆ ಕಡ್ಡಾಯವಾಗಿ ಪಡೆಯತಕ್ಕದ್ದು.
7. ನಿಗಮಕ್ಕೆ ಒದಗಿಸಲಾಗಿರುವ ಅನುದಾನದ ಮಿತಿಯಲ್ಲಿಯೇ ಯೋಜನೆಗಳನ್ನು ಅನುಷ್ಠಾನ ಮಾಡುವುದು.
8. ಯೋಜನಾವಾರು ಸ್ವೀಕೃತವಾದ ಅರ್ಜಿಗಳ ಸಂಖ್ಯೆ, ಆಯ್ಕೆ ಪ್ರಕ್ರಿಯೆಯ ವಿವರಗಳು ಹಾಗೂ ಆರ್ಥಿಕ ಮತ್ತು ಭೌತಿಕ ಪ್ರಗತಿಯ ತಾಲ್ಲೂಕುವಾರು, ಜಿಲ್ಲಾವಾರು ಮಾಹಿತಿಯನ್ನು ನಿಗಮದ ಜಾಲತಾಣದಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಕಡ್ಡಾಯವಾಗಿ ವ್ಯವಸ್ಥಾಪಕ ನಿರ್ದೇಶಕರು ಅಳವಡಿಸತಕ್ಕದ್ದು.
9. ಮೇಲಿನ ಯೋಜನೆಗಳ ಫಲಾನುಭವಿಗಳ ಆಯ್ಕೆಯಲ್ಲಿ ಸರ್ಕಾರದ ಇತರೆ ಇಲಾಖೆಗಳು/ನಿಗಮಗಳು/ಮಂಡಳಿಗಳು/ಪ್ರಾದಿಕಾರಗಳು ಅನುಷ್ಠಾನಗೊಳಿಸು ತ್ತಿರುವ ಇದೆ ರೀತಿಯ ಯೋಜನೆಗಳಲ್ಲಿನ ಫಲಾನುಭವಿಗಳ ಪುನರಾವರ್ತನೆಯಾಗಬಾರದು ಹಾಗೂ ಈ ಹಿಂದೆ ಇದೇ ಯೋಜನೆಗಳಲ್ಲಿ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಹಂತದಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದ ಯೋಜನೆಗಳಲ್ಲಿನ ಫಲಾನುಭವಿಗಳ ಪುನರಾವರ್ತನೆಯಾಗಬಾರದು.

23/05/22 ......3